ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಮಂಜೂರಾದ ಕಾಮಗಾರಿಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

426 (500) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2018-19ನೇ ಸಾಲಿನಿಂದ 2020-21ನೇ ಸಾಲಿನವರೆಗೆ ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಸಣ್ಣ ನೀರಾವರಿ ಇಲಾಖೆವತಿಯಿಂದ ಮಂಜೂರಾದ ಕಾಮಗಾರಿಗಳಾವುವು; (ತಾಲ್ಲೂಕುವಾರು ಅಂದಾಜು ಪಟ್ಟಿ ಸಹಿತ ಮಾಹಿತಿ ನೀಡುವುದು)

(ಆ) ಮಂಜೂರಾದ ಕಾಮಗಾರಿಗಳಲ್ಲಿ ಈವರೆವಿಗೂ ಉದ್ಘಾಟನೆ ಮಾಡಿ ಪ್ರಾರಂಭ ಮಾಡಿರುವ ಕಾಮಗಾರಿಗಳು ಯಾವುವು; (ತಾಲ್ಲೂಕುವಾರು ಪ್ರತ್ಯೇಕವಾಗಿ ವಿವರವನ್ನು ನೀಡುವುದು)

(ಇ) ನಾಗಮಂಗಲ ತಾಲ್ಲೂಕು ಹೊನಕೆರೆ ಹೋಬಳಿ ಶ್ಯಾನುಭೋಗನಹಳ್ಳಿ ವ್ಯಾಪ್ತಿಯಲ್ಲಿ ಕಲ್ಲುಕೊರೆ ಸಮೀಪ ಸುಮಾರು 100.00ಲಕ್ಷ ಅಂದಾಜಿನಲ್ಲಿ ಚೆಕ್ ಡ್ಯಾಂ ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಪ್ರಸ್ತುತ ಚಾಲ್ತಿಯಲ್ಲಿರುವ ಕಲ್ಲುಕೊರೆ ಹತ್ತಿರದಲ್ಲಿಯೇ ಚೆಕ್ ಡ್ಯಾಂ ನಿರ್ಮಾಣ ಮಾಡುತ್ತಿರುವುದರಿಂದ ಚೆಕ್ ಡ್ಯಾಂಗೆ ಹಾನಿಯಾಗುವುದಿಲ್ಲವೆ; ಈ ಸಂಬಂಧ ಕಾಮಗಾರಿಗೆ ಸ್ಥಳ ಆಯ್ಕೆ ಮಾಡುವಾಗ ಕಲ್ಲುಕೊರೆ ಪಕ್ಕದಲ್ಲಿಯೇ ಸ್ಥಳ ಆಯ್ಕೆ ಮಾಡಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು)